ಸದರೀ ದರಖಾಸ್ತುದಾರರಾದ ಗರುಡವ್ಯನವರ ಅರ್ಜೀಯನ್ನು 1884ನೇ ಇಸವಿ ಡಿಸೆಂಬರ್ ತಿಂಗಳು ತಾರೀಖು 11ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಗರುಡಾಚಾರ್ಯರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ನವೆಂಬರ್ ತಿಂಗಳು 19ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಸಿ. ಕೈಸ್,
ಸಬ್ ಜಡ್ಜ.

ಸೆಂಟ್ರಲ್ ಜೈಲ್.

ಇಸ್ತಿಹಾರ್‌ನಾಮಾ.

ತಾರೀಖು 4ನೇ ನವೆಂಬರ್ 1884.

ಇದರಿಂದ ಪ್ರಕಟಿಸಲ್ಪಡುವದೇನಂದರೆ,—ಬೆಂಗಳೂರು ಸೆಂಟ್ರಲ್ ಜೈಲ್‌ನಲ್ಲಿಯೂ, ಡಿಸ್ಟ್ರಿಕ್ಟು ಲಾಕಪ್ಪಿನಲ್ಲಿಯೂ, ಖೈದು ಮಾಡಲ್ಪಟ್ಟಿರುವ ಖೈದಿಗಳ ಉಪಯೋಗದ ಬಗ್ಯೆ ಬೇಕಾದ ಆಹಾರ ಪದಾರ್ಥಗಳು ವಗೈರೇ ದರೋಬಸ್ತು ಜಿನಸಿಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಯೆ ಕೊಡಲ್ಪಡುವ ಬಂದು ಮಾಡಲ್ಪಟ್ಟ ದರಖಾಸ್ತುಗಳನ್ನು ಸ॥ 1884ನೇ ಇಸವಿ ಡಿಸೆಂಬರ್ 1ನೇ ತಾರೀಖಿನ ವರಿಗೆ ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರು ತೆಗದುಕೊಳ್ಳುವರು.

2. ಮೇಲೆ ಕಂಡ ತಾರೀಖಿಗೆ ತರುವಾಯ ದರಖಾಸ್ತುಗಳು ಯಾವತ್ತೂ ತೆಗದುಕೊಳ್ಳಲ್ಪಡಲಾರವು.

3. ದರಖಾಸ್ತುಗಳ ಮೇಲೆ "ಸೆಂಟ್ರಲ್ ಜೈಲಿಗೂ; ಡಿಸ್ಟ್ರಿಕ್ಟು ಲಾಕಪ್ಪಿಗೂ ಜಿನಸೀಗಳ ಸರಬರಾಯಿ ಬಗ್ಯೆ ದರಖಾಸ್ತುಗಳು" ಯಂಬದಾಗಿ ವಿಳಾಸೆ ಬರೆಯಲ್ಪಡತಕ್ಕದ್ದು.

4. ನಗದಾಗಿಯಾಗಲಿ ಕರೆನ್ಸಿ ನೋಟುಗಳ ಮೂಲಕವಾಗಿಯಾಗಲಿ 500 ರೂಪಾಯಿಗಳ ಡಿಪಾಜಿಟ್ ದೇಖೀಲ್ ಕಳುಹಿಸಲ್ಪಟ್ಟ ಹೊರ್ತು ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರವು.

5. ದರಖಾಸ್ತುಗಳು ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರಿಂದ ಅವರ ಆಫೀಸಿನಲ್ಲಿ ಮೇಲೆ ಕಂಡ ತಾರೀಖಿನೊಳಗೆ ಅಲ್ಲಿಗೆ ಬರುವದಕ್ಕೆ ಖಾಯಿಷ್ ಮಾಡುವ ದರಖಾಸ್ತುದಾರರ ರೂಬರೂ ಖುಲ್ಲಾ ಮಾಡಲ್ಪಡುವವು.

6. ದರೋಬಸ್ತು ದರಖಾಸ್ತುಗಳಲ್ಲಿಯೂ ಈಕೆಳಗೆ ಬರುವ ವಳ್ಳಿಗರಹಾದ ಜಿನಸೀಗಳನ್ನು ರೂಪಾಯಿ 1ಕ್ಕೆ ಪೌಂಡ್ ತೂಕದ ಪ್ರಕಾರ ಸರಬರಾಯಿ ಮಾಡತಕ್ಕ ದರವನ್ನು ನಮೂದಿಸತಕ್ಕದ್ದು.

ಅಕ್ಕಿ	ಹಶೇ ಅಕ್ಕಿ ವ ಕುದಪಲ ಅಕ್ಕಿ	...	ತರಕಾರಿ
ರಾಗಿ	.. ..	..	ಹುರಳಿ
ಬೇಳೆ	.. ..	..	ರವೆ
ಅವರೆ	.. ..	..	ಸಕ್ಕರೆ
ಮೊಂಸ	.. ..	..	ಕಾಫಿ
ಮೊಸರು	.. ..	..	ತೇ ಯಲೆ
ಯಳ್ಳೆಂಣೆ	.. ..	..	ರೊಟ್ಟಿ
ತುಪ್ಪ	.. ..	..	ಹಾಲು
ಹುಣಸೇಹಣ್ಣು	.. ..	..	ಶೀಗೆಕಾಯಿ
ಉಪ್ಪು	.. ..	..	ಸಬ್ಬಸ್ಸಿ
ಮಸಾಲೆ ಪುಡಿ	.. ..	..	ಗೇರುಬೀಜ
ಈರುಳ್ಳಿ	.. ..	..	ಮೆಣಸು
ಬೆಳ್ಳುಳ್ಳಿ	.. ..	..	ಉಣಗಿದ ಸಾಬೆ

7. ದರಖಾಸ್ತು ಪಟ್ಟಿಯಲ್ಲಿ ಮೇಲೆನಮೂದಿಸಿದ ಪದಾರ್ಥಗಳಿಗೆ ಮಾತ್ರವಲ್ಲದೆ ದೀಪದ ಯಂತೆ, ಕೆರೋಜಿನ್ ಯಂತೆ, ಮಂಣಿನ ಹರಿವಾಣಗಳು, ಲೋಟುಗಳು, ಪರಿಕೆ ವಗೈರೇ ಪದಾರ್ಥಗಳಿಗೂ ದರಗಳು ನಮೂದಿಸಬೇಕು. ಕಂಟ್ರಾಕ್ಟುದಾರನು ಖೈದಿಗಳಿಂದ ಬೀಸಲ್ಪಡುವ ಬಗ್ಯೆ ರಾಗಿಯನ್ನು ಸರಬರಾಯಿ ಮಾಡತಕ್ಕದ್ದು. ಮತ್ತು ಹಿಟ್ಟಾಗಿ ಕೊಡಲ್ಪಡುವದು, ರಾಗಿ ಧಾರಣೆ ಪ್ರಕಾರ ಸರಬರಾಯಿ ಮಾಡಿದ್ದನ್ನು ಹಾಗೆ ಕೊಡಲ್ಪಟ್ಟ ಪರಿಮಾಣದ ಮೇಲೆ ಲೆಕ್ಕ ಮಾಡಿ ಅದರಂತೆ ಮೊಬಲಗು ಪಾವತೀ ಮಾಡಲ್ಪಡುತ್ತೆ.

8. (ನಾನಾ ಸ್ಕೇಲ್‌ಗಳ ಮೇಲೆ ಯಿರುವ ರೋಜಿನಾ 750 ಮಂದಿ ಖೈದಿಗಳಿಗಾಗಿ) ಈ ಸಂವತ್ಸರಕ್ಕೆ ಬೇಕಾಗಬಹುದಾದ ಮುಖ್ಯ ಪದಾರ್ಥಗಳ ಅಂದಾಜಾ ಇದರಡೀ ಕಂಡಂತೆ ಯಿರತಕ್ಕದ್ದು.

	ಪೌಂಡುಗಳು.		ಪೌಂಡುಗಳು.
ರಾಗಿ ..	346,340	ಯಳ್ಳೆಂಣೆ ..	2,361
ಅಕ್ಕಿ ..	78,471	ಉಪ್ಪು ..	10,417
ತೊಗರಿ ಅಥವಾ ಅವರೆ	52,083	ಮಸಾಲೆ ಪುಡಿ ..	7,986
ತರಕಾರಿ ..	104,161	ಈರುಳ್ಳಿ ..	10,417
ಮೊಸರು ..	23,612	ಸಾಬೆ ..	416,667
ತುಪ್ಪ ..	2,361		

9. ಸೂಪರ್ಟೆಂಡೆಂಟರವರು, ಯಾವ ದರಖಾಸ್ತನ್ನಾಗಲಿ ಕಾರಣವನ್ನು ತಿಳಿಸದೇಯೇ ನಿರಾಕರಿಸುವ ಸ್ವಾತಂತ್ರ್ಯವನ್ನು ತಮ್ಮಲ್ಲಿ ವೈಶಿಸಿಕೊಂಡು ಯಿರುತ್ತಾರೆ.

10. ಮಂಜೂರಾದ ದರಖಾಸ್ತುದಾರನ ತೇವಣೀ ಮೊಬಲಗು ನಿಲ್ಲಿಸಿಕೊಳ್ಳಲ್ಪಟ್ಟು ಅವನು ಗುತ್ತಿಗೇಚೀಟು ಬರದುಕೊಡಲಿಕ್ಕಾಗಲಿ ತನ್ನ ಗುತ್ತಿಗೆ ಮಂಜೂರಾದ್ದು ತನಿಗೆ ತಿಳಿಸಲ್ಪಟ್ಟ ತಾರೀಖು ಲಾಗಾಯತ್ತು ಒಂದು ವಾರದೊಳಗಾಗಿ ನಗದಾಗಿ ಯೂ ಗವರ್ಮೆಂಟ್ ಪತ್ರಗಳ ಮೂಲಕ 1,500 ರೂಪಾಯಿಗಳಿಗೆ ಜಾಮೀರ್ ಕೊಡಲಿಕ್ಕಾಗಲಿ ತಪ್ಪಿದರೆ ಸದರೀ ತೇವಣೀ ಮೊಬಲಗು ಸರಕಾರಕ್ಕೆ ಸೇರಿಸಿಕೊಳ್ಳಲ್ಪಡುವದು.

11. ಕಂಟ್ರಾಕ್ಟುದಾರನಿಗೆ ನಗದು ಅಡ್ವಾನ್ಸ್ ಯಾವದೂ ಕೊಡಲ್ಪಡಲಾರದು: ಸರಬರಾಯಿ ಮಾಡಲ್ಪಟ್ಟ ಪದಾರ್ಥಗಳಿಗಾಗಿ ಮೊಬಲಗುಗಳು ಪ್ರತಿ ತಿಂಗಳ 1ನೇ ತಾರೀಖಿಗೆ ತರುವಾಯ ಕೂಡಿದಷ್ಟು ತ್ವರೆಯಾಗಿ ಸೆಂಟ್ರಲ್ ಜೈಲ್ ಸೂಪರ್ಟೆಂಡೆಂಟರಿಂದ ಸಲ್ಲಿಸಲ್ಪಡುವದು.

12. ಕಂಟ್ರಾಕ್ಟುದಾರನಿಗೆ ಉಗ್ರಾಣದ ಬಗ್ಗೆ ಒಂದು ಖೋಲೆಯು ಕೊಡಲ್ಪಡುವದು. ಅದರಲ್ಲಿ ನಷ್ಟವಾಗದೇ ಯಿರುವ ದರೋಬಸ್ತು ಪದಾರ್ಥಗಳನ್ನೂ ಅವನು ಯಿಟ್ಟುಕೊಳ್ಳಬಹುದು, ಮೊಸರ ವಗೈರೆ ನಷ್ಟವಾಗತಕ್ಕ ಪದಾರ್ಥಗಳು ಪ್ರತಿ ದಿವಸ ಬೆಳಿಗ್ಗೆ 8 ಘಂಟೆಯೊಳಗೆ ಜೈಲಿಗೆ ಬಂದಿರತಕ್ಕದ್ದು.

13. ಕಂಟ್ರಾಕ್ಟು ವಳಗೇಣಿಗೆ ಕೊಡಲ್ಪಡಕೂಡದು.

14. ಕಂಟ್ರಾಕ್ಟಿನ ನಿಬಂಧನೆಗಳ ಬಾಬತು ಯಾವ ಅತಿಕ್ರಮಕ್ಕಾಗಲಿ, ಯಾವದಾದರೂ ಹಲ್ಕೀ ಪದಾರ್ಥಗಳ ಸರಬರಾಯಿ ಬಗ್ಯಾಗಲಿ, ಸೆಂಟ್ರಲ್ ಜೈಲ್ ಸೂಪರ್ಟೆಂಡೆಂಟರ ಯಖ್ತ್ಯಾರೀ ಮೇಲೆ 150 ರೂಪಾಯಿಗಳಿಗೆ ಮಿರಢ ಒಂದು ಜುರ್ಮಾನೆ ವಸೂಲ್ ಮಾಡಲ್ಪಡುವದು, ಬಾರ್‌ಬಾರ್ ಅತಿಕ್ರಮ ನಡೆಸಿದ ಪಕ್ಷಕ್ಕೆ ಕಂಟ್ರಾಕ್ಟು ರದ್ದು ಮಾಡಲ್ಪಟ್ಟು ಜಾಮೀರ್ ಮೊಬಲಗು ಸರಕಾರಕ್ಕೆ ತೆಗದುಕೊಳ್ಳಲ್ಪಡುವದು.

15. ಕಂಟ್ರಾಕ್ಟಿನ ಅತಿಕ್ರಮಕ್ಕೆ ಸಂಬಂಧಿಸಿದ ದರೋಬಸ್ತು ಸಂಗತಿಗಳಲ್ಲಿಯೂ ಸೆಂಟ್ರಲ್ ಜೈಲ್ ಸೂಪರ್ಟೆಂಡೆಂಟರ ತೀರ್ಮಾನವು ಅಖೈರಾಗಿರತಕ್ಕದ್ದು.

16. ಕಂಟ್ರಾಕ್ಟುದಾರನು ಕಂಟ್ರಾಕ್ಟಿನ ದರದ ಪ್ರಕಾರವೇ ಖೈದೀಗಳ ಉಪಯೋಗಕ್ಕೊಸ್ತರ ಜೈಲ್ ತೋಟದಿಂದ ಕಾಯಿಪಲ್ಲೆಗಳನ್ನು ಕೊಂಡು ಕೊಳ್ಳಬೇಕು.

17. ಹೆಚ್ಚಿಗೇ ಸಂಗತಿ ಯಾವದಾದರೂ ತಿಳಕೊಳ್ಳಬೇಕಾದರೆ ಸೂಪರ್ಟೆಂಡೆಂಟರ ಆಫೀಸಿನಲ್ಲಿ ಕೇಳಿ ತಿಳದುಕೊಳ್ಳತಕ್ಕದ್ದು.

18. ಈ ಕಂಟ್ರಾಕ್ಟು ಮೈಸೂರು ಸೀಮೆಯಲ್ಲಿನ ಜೈಲ್‌ಗಳ ಇನ್‌ಸ್ಪೆಕ್ಟರ್ ಜನರಲ್ಲವರ ಮಂಜೂರಾತಿಗೆ ವಳಪಟ್ಟಿರತಕ್ಕದ್ದು.

ಜೆ. ಹೆಡರ್ಸ್ಟ್,
ಸೂಪರ್ಟೆಂಡೆಂಟ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರೀಯವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 463.

ಮೃತಪಟ್ಟ ಶಿದ್ದರಾಮಯ್ಯನ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ ಥೋಂಜೋಜೆಯು, ಮೃತಪಟ್ಟ ಸದರೀ ಶಿದ್ದರಾಮಯ್ಯನಿಗೆ ಸೋದರ ಮಾವನಮಗ ಆಗಬೇಕೆಂಬ ಹಕ್ಕುದಾರೀ ಮೇಲೆ

ಮೈಸೂರು ಬಸವನ ಮೊಹಲ್ಲಾ ಸ್ಥಳದ ಸದರೀ ಥೋಂಜೋಜೆಯು ಸದರೀ ವಾಸಸ್ಥನಾಗಿ ಮೃತಪಟ್ಟ ಶಿದ್ದರಾಮಯ್ಯನ ಜಿಂದಗಿ ಬಗ್ಯಾಗಿ